**Bangalore**
**Regional News**
**16.07.2025 / 2.30 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು :

೧. ಭೂಮಿ ವಿವಾದದಿಂದ ರಾಜ್ಯ ಯಾವುದೇ ಕೈಗಾರಿಕೆಗಳನ್ನು ಕಳೆದುಕೊಳ್ಳುವುದಿಲ್ಲ - ಸಚಿವ ಎಂ.ಬಿ.ಪಾಟೀಲ್ ಸ್ಪಷ್ಟನೆ

೨. ಬೆಂಗಳೂರಿನಲ್ಲಿ ಎಐಸಿಸಿ ಹಿಂದುಳಿದ ವರ್ಗಗಳ ರಾಷ್ಟ್ರೀಯ ಸಲಹಾ ಮಂಡಳಿ ಸಭೆ

೩. ಶಾಸಕ ಭೈರತಿ ಬಸವರಾಜು ವಿರುದ್ಧ ಎಫ್ಐಆರ್ ದಾಖಲು - ಬಂಧನ ಭೀತಿ

೪. ಏಕೀಕೃತ ಸಹಾಯವಾಣಿ ವ್ಯವಸ್ಥೆ ರೂಪಿಸುವಂತೆ ಬಿಬಿಎಂಪಿಗೆ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಸೂಚನೆ

><><><><><><><><><><><

ಭೂ ವಿವಾದದಿಂದ ರಾಜ್ಯದ ಯಾವುದೇ ಕೈಗಾರಿಕೆಗಳು ಸ್ಥಳಾಂತರಗೊಳ್ಳುವುದಿಲ್ಲ ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತಾನಾಡಿದ ಅವರು, ಏರೋಸ್ಪೇಸ್ ಮತ್ತು ರಕ್ಷಣಾ ವಲಯಗಳಲ್ಲಿ ರಾಜ್ಯವು ರಾಷ್ಟ್ರೀಯ ಪಾಲಿನ ಶೇಕಡ ೬೫ರಷ್ಟಿದೆ. ಜಾಗತಿಕವಾಗಿ ಕರ್ನಾಟಕ ಮತ್ತು ಬೆಂಗಳೂರು ಮೂರನೇ ಅತೀ ದೊಡ್ಡ ಏರೋಸ್ಪೇಸ್ ಪರಿಸರ ವ್ಯವಸ್ಥೆ ಹೊಂದಿದೆ ಎಂದು ಹೇಳಿದ್ದಾರೆ. ಭೂಮಿ ಕೊರತೆಯಿಂದ ಒಂದೇ ಒಂದು ಉದ್ಯಮವು ರಾಜ್ಯದಿಂದ ಹೊರ ಹೋಗುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ದೇವನಹಳ್ಳಿ ಪ್ರದೇಶದಲ್ಲಿಯೂ ಭೂಮಿ ಲಭ್ಯವಿದ್ದು ಆಂಧ್ರಪ್ರದೇಶದ ಸಚಿವ ನಾರಾ ಲೋಕೇಶ್ ಆಹ್ವಾನದ ಹಿನ್ನೆಲೆಯಲ್ಲಿ ಯಾವುದೇ ಕೈಗಾರಿಕೆಗಳು ಸ್ಥಳಾಂತರಗೊಳ್ಳುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

><><><><><><><><><><><

AICC ಹಿಂದುಳಿದ ವರ್ಗಗಳ ರಾಷ್ಟ್ರೀಯ ಸಲಹಾ ಮಂಡಳಿ ಮೊದಲ ಸಭೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ಪ್ರಗತಿಯಲ್ಲಿದೆ. ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಹಿಂದುಳಿದ ವರ್ಗಗಳ ಸಮಿತಿಯ ಸಂಚಾಲಕ ಅನಿಲ್ ಜೈನ್, ವಿವಿಧ ರಾಜ್ಯಗಳ ಮಾಜಿ ಮುಖ್ಯಮಂತ್ರಿಗಳು, ಕೇಂದ್ರದ ಮಾಜಿ ಸಚಿವರು ಸೇರಿದಂತೆ ಸಲಹಾ ಮಂಡಳಿಯ

ಸದಸ್ಯರು ಉಪಸ್ಥಿತರಿದ್ದಾರೆ. ಸಭೆಯಲ್ಲಿ ದೇಶದಲ್ಲಿ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿರುವ ಸಮುದಾಯಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಹಾಗೂ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿಸ್ತೃತವಾಗಿ ಚರ್ಚೆ ನಡೆಸಲಾಗುತ್ತಿದೆ.

><><><><><><><><><><

ರೌಡಿಶೀಟರ್ ಹತ್ಯೆ ಪ್ರಕರಣದಲ್ಲಿ ಬಿಜೆಪಿ ಶಾಸಕ ಭೈರತಿ ಬಸವರಾಜ್ ವಿರುದ್ಧ ಎಫ್ಐಆರ್ ದಾಖಲಾಗಿದೆ. ಬಂಧನ ಭೀತಿ ಹಿನ್ನೆಲೆಯಲ್ಲಿ ಎಫ್ಐಆರ್ ರದ್ದುಕೋರಿ ಭೈರತಿ ಬಸವರಾಜ್ ಹೈಕೋರ್ಟ್ ಮೊರೆ ಹೋಗಿದ್ದಾರೆ. ಪ್ರಕರಣ ಕುರಿತಂತೆ ಪ್ರತಿಕ್ರಿಯಿಸಿರುವ ಭೈರತಿ ಬಸವರಾಜ್ ಐದನೇ ಆರೋಪಿಯಾಗಿ ಹೆಸರಿಸಲಾದ ಪ್ರಕರಣಕ್ಕೂ ತಮಗೂ ಯಾವುದೇ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಈ ಪ್ರಕರಣದಲ್ಲಿ ತಮ್ಮನ್ನು ಉದ್ದೇಶ ಪೂರಕವಾಗಿ ಸಿಲುಕಿಸಲಾಗಿದೆ ಎಂದು ದೂರಿದ್ದಾರೆ.

><><><><><><><><><><

ಪೋಷಕರು ಬಾಲ್ಯ ವಿವಾಹ ಮಾಡುವ ಮುಂಚೆ ಒಂದು ಬಾರಿ ಮಕ್ಕಳ ಮನಸ್ಥಿತಿ, ಮಾನಸಿಕ ಸ್ಥಿತಿ, ದೈಹಿಕವಾಗಿ ಅವರ ಮೇಲೆ ಆಗುವ ಪರಿಣಾಮಗಳನ್ನು ತಿಳಿದುಕೊಳ್ಳಬೇಕು ಎಂದು ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ. ಧಾರವಾಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯೋಜಿಸಿದ್ದ ಅತ್ಯಾಚಾರ, ಪೋಕ್ಸೋ, ಬಾಲ್ಯವಿವಾಹ ಮತ್ತು ಬಾಲ ಗರ್ಭಿಣಿ ಸಂತ್ರಸ್ಥೆಯರು ಮತ್ತು ಅವರ ಪಾಲಕರೊಂದಿಗೆ ಸಂವಾದ ಮತ್ತು ಅರಿವು ಮೂಡಿಸುವ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಮದುವೆ ಮಾಡಿದರೆ ನಮ್ಮ ಭಾರ ಕಡಿಮೆ ಆಗುತ್ತದೆ ಎಂಬ ಮನಸ್ಥಿತಿಯಿಂದ ಪೋಷಕರು ಹೊರ ಬರಬೇಕು ಎಂದು ಸಲಹೆ ನೀಡಿದ್ದಾರೆ.

ಧ್ವನಿ: ಜಿಲ್ಲಾಧಿಕಾರಿ ದಿವ್ಯ ಪ್ರಭು (೩೧ ಸೆಕೆಂಡುಗಳು)

ಬಾಲ್ಯವಿವಾಹಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖಾ ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡಬೇಕೆಂದು ದಾವಣಗೆರೆಯಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ.ನಾಗಣ್ಣಗೌಡ ಸಲಹೆ ನೀಡಿದ್ದಾರೆ. ದಾವಣಗೆರೆ ಜಿಲ್ಲೆಯಲ್ಲಿ ಕಳೆದ ೫ ವರ್ಷಗಳಲ್ಲಿ ೫ ಸಾವಿರದ ೫೧೩ ಬಾಲಕಿಯರು ೧೮ ವರ್ಷ ತುಂಬುವ ಮೊದಲೇ ಗರ್ಭಿಣಿಯರಾಗಿದ್ದು, ಇದು ಕಳವಳಕಾರಿಯಾದ ಸಂಗತಿ ಎಂದು ತಿಳಿಸಿದ್ದಾರೆ. ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಬಾಲ ಗರ್ಭಿಣಿಯರು ಕಂಡು ಬಂದಿರುವುದನ್ನು ಗಮನಿಸಿದರೆ ಸಂಬಂಧಿಸಿದ

ಇಲಾಖೆಗಳು ಸರಿಯಾಗಿ ಕೆಲಸ ಮಾಡದೇ ಇರುವುದಕ್ಕೆ ಸಾಕ್ಷಿಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

><><><><><><><><><><

ದೀರ್ಘಕಾಲದ ಬೇಡಿಕೆಯಾಗಿದ್ದ ಮಡಗಾಂವ್-ಮಂಗಳೂರು ಸೆಂಟ್ರಲ್ ಎಕ್ಸ್‌ಪ್ರೆಸ್ ರೈಲು ಕರಾವಳಿಯಲ್ಲಿ ನಿಲುಗಡೆಗೆ ರೈಲ್ವೆ ಇಲಾಖೆ ಹಸಿರು ನಿಶಾನೆ ತೋರಿಸಿದೆ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ಇದರಿಂದ ಅಂಕೋಲಾ ತಾಲೂಕಿನ ಹಾರವಾಡ ಮತ್ತು ಕುಮಟಾ ತಾಲೂಕಿನ ಮಿರ್ಜಾನ್ ನಿಲ್ದಾಣಗಳಲ್ಲಿ ರೈಲು ನಿಲುಗಡೆಯಾಗಲಿದ್ದು, ಈ ಭಾಗದ ಜನರಿಗೆ ವ್ಯಾಪಾರ, ವಾಣಿಜ್ಯ ಹಾಗೂ ವೈದ್ಯಕೀಯ ಉದ್ದೇಶಗಳಿಗಾಗಿ ಮಂಗಳೂರು ಮತ್ತು ಗೋವಾ ಪ್ರಯಾಣಿಸಲು ಹೆಚ್ಚು ಅನುಕೂಲವಾಗಲಿದೆ. ಈ ಆದೇಶಕ್ಕೆ ಕಾರಣರಾದ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಾಗೂ ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ. ಸೋಮಣ್ಣ ಅವರನ್ನು ವಿಶ್ವೇಶ್ವರ ಹೆಗಡೆ ಕಾಗೇರಿ ಅಭಿನಂದಿಸಿದ್ದಾರೆ.

><><><><><><><><><><

ವಿಪತ್ತು ನಿರ್ವಹಣೆ ಸಂದರ್ಭದಲ್ಲಿ ಏಕೀಕೃತ ಸಹಾಯವಾಣಿ ವ್ಯವಸ್ಥೆ ರೂಪಿಸಿ ಎಂದು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಜಂಟಿ ಸಲಹೆಗಾರ ಪವನ್ ಕುಮಾರ್ ಸಿಂಗ್ ಕರೆ ನೀಡಿದ್ದಾರೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಚೇರಿ ಆವರಣದಲ್ಲಿ ಇಂದು ನಡೆದ ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ಮೈಸೂರು ಜಿಲ್ಲೆಗಳ ಜಿಲ್ಲಾ ವಿಪತ್ತು ನಿರ್ವಹಣಾ ಸಿದ್ಧತೆ ಹಾಗೂ ನಿರ್ವಹಣೆ ಪ್ರಕರಣಗಳ ಬಗ್ಗೆ ಪ್ರಾತ್ಯಕ್ಷಿಕೆ ವೀಕ್ಷಿಸಿ ಅವರು ಮಾತನಾಡಿದರು. ಮೂರೂ ಜಿಲ್ಲೆಗಳಲ್ಲಿ ಚಾಲ್ತಿಯಲ್ಲಿರುವ ವಿಪತ್ತು ನಿರ್ವಹಣಾ ಕ್ರಮಗಳ ಬಗ್ಗೆ ಮಾಹಿತಿ ಪಡೆದುಕೊಂಡ ಅವರು ಅಗತ್ಯ ಮಾರ್ಗದರ್ಶನ ನೀಡಿದರು. ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಹಿರಿಯ ಸಂಶೋಧನಾಧಿಕಾರಿ ಅಭಿಷೇಕ್ ಶರ್ಮಾ ಪ್ರಾತ್ಯಕ್ಷಿಕೆ ಮೂಲಕ ವಿಪತ್ತು ನಿರ್ವಹಣಾ ಕ್ರಿಯಾಯೋಜನೆ, ಮಾರ್ಗಸೂಚಿಗಳ ಬಗ್ಗೆ ವಿವರಿಸಿ ರಾಜ್ಯ ಹಾಗೂ ಜಿಲ್ಲಾ ವಿಪತ್ತು ನಿರ್ವಹಣೆ ಪ್ರಾಧಿಕಾರಗಳೊಂದಿಗೆ ಸಹಕಾರ ಹಾಗೂ ಮಾರ್ಗದರ್ಶನ ಒದಗಿಸುವ ಬಗ್ಗೆ ಮಾಹಿತಿ ನೀಡಿದರು.

><><><><><><><><><><

ಆಕಾಶವಾಣಿಗೆ ಈಗ ೯೦ರ ಸಂಭ್ರಮ. ಈ ಹಿನ್ನೆಲೆಯಲ್ಲಿ ಆಕಾಶವಾಣಿ ವಿಶೇಷ ಕಾರ್ಯಕ್ರಮದ ಅತಿಥಿಯಾಗಿ ಇಂದು iಟಿಜಿosಥಿss ಪ್ರತಿಷ್ಠಾನದ ರೂವಾರಿ, ರಾಜ್ಯಸಭಾ ಸದಸ್ಯೆ ಸುಧಾಮೂರ್ತಿ ಭಾಗವಹಿಸಿದ್ದರು. ಈ ವೇಳೆ ಮಾತನಾಡಿದ ಅವರು ಆಕಾಶವಾಣಿ ಎಲ್ಲರ ಒಡನಾಡಿ. ರಾಷ್ಟ್ರೀಯ ಪ್ರಸಾರಕ, ಸತ್ಯದ ಪ್ರತಿಪಾದಕ, ಆಕಾಶವಾಣಿ ಗಂಗೆಯಷ್ಟೇ ಪವಿತ್ರ ಮತ್ತು ಸೆಳೆತ ಹೊಂದಿರುವ ಮಾಧ್ಯಮ ಎಂದು ಬಣ್ಣಿಸಿದರು.

><><><><><><><><><><

’ಸ್ವಚ್ಛ ಸರ್ವೇಕ್ಷಣಾ ಅಭಿಯಾನದ’ ಹಿನ್ನೆಲೆಯಲ್ಲಿ ಇಂದು ರಾತ್ರಿ ೭.೪೫ ಕ್ಕೆ ಆಕಾಶವಾಣಿಯಲ್ಲಿ ೫ ನಿಮಿಷ ಸಂವಾದ ಕಾರ್ಯಕ್ರಮ ಮೂಡಿಬರಲಿದೆ.

><><><><><><><><><><

ಶರಾವತಿ ಜಲವಿದ್ಯುತ್ ಯೋಜನೆಯ ಲಿಂಗನಮಕ್ಕಿ ಜಲಾನಯನ ಪ್ರದೇಶದಲ್ಲಿ ಸತತವಾಗಿ ಮಳೆ ಬೀಳುತ್ತಿರುವುದರಿಂದ ಲಿಂಗನಮಕ್ಕಿ ಜಲಾಶಯಕ್ಕೆ ಭಾರಿ ಪ್ರಮಾಣದಲ್ಲಿ ನೀರು ಹರಿದು ಬರುತ್ತಿದೆ. ಲಿಂಗನಮಕ್ಕಿ ಜಲಾಶಯದ ನೀರಿನ ಮಟ್ಟ ದಿನೇ ದಿನೇ ಏರುತ್ತಿದ್ದು, ಜಲಾಶಯದ ಕೆಳಭಾಗ ಹಾಗೂ ನದಿಪಾತ್ರದ ಸಾರ್ವಜನಿಕರು ಎಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ. ಅಣೆಕಟ್ಟೆಯ ಸುರಕ್ಷತೆ ದೃಷ್ಟಿಯಿಂದ ಹೆಚ್ಚುವರಿ ನೀರನ್ನು ಜಲಾಶಯದಿಂದ ಯಾವುದೇ ಸಮಯದಲ್ಲಿ ಹೊರಬಿಡಲಾಗುವುದು. ಆದ್ದರಿಂದ, ಅಣೆಕಟ್ಟೆಯ ಕೆಳದಂಡೆಯಲ್ಲಿ ಹಾಗೂ ನದಿಯ ಪಾತ್ರದುದ್ದಕ್ಕೂ ವಾಸಿಸುತ್ತಿರುವ ಸಾರ್ವಜನಿಕರು ತಮ್ಮ ಜನ, ಜಾನುವಾರುಗಳೊಂದಿಗೆ ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಗೊಳ್ಳಬೇಕೆಂದು ಹಾಗೂ ಪ್ರವಾಸಿಗರು ನದಿಯ ನೀರಿಗೆ ಇಳಿಯಬಾರದೆಂದು ಕಾರವಾರ ಕಾರ್ಯನಿರ್ವಾಹಕ ಅಭಿಯಂತರರ ಪ್ರಕಟಣೆ ತಿಳಿಸಿದೆ.

><><><><><><><><><><

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಪ್ರಧಾನಮಂತ್ರಿ ಸೂರ್ಯಘರ್ ಯೋಜನೆಯಡಿ ದಕ್ಷಿಣ ಕನ್ನಡ ಜಿಲ್ಲೆಯ ೧೩ ಗ್ರಾಮಗಳನ್ನು ಆಯ್ಕೆಮಾಡಲಾಗಿದೆ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ ತಿಳಿಸಿದ್ದಾರೆ. ನೆಲ್ಯಾಡಿ, ಬೆಳ್ಳಾರೆ, ಕೆಯ್ಯೂರು, ಒಳಮೊಗ್ರು, ನರಿಮೊಗ್ರು, ಉಜಿರೆ, ನರಿಕೊಂಬು, ತೆಂಕಮಿಜಾರು, ಪುತ್ತಿಗೆ, ಬೆಳುವಾಯಿ, ಅಡ್ಡೂರು, ಮೂಳೂರು ಮತ್ತು ತಲಪಾಡಿ ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ. ಈ ಯೋಜನೆಯಡಿಯಲ್ಲಿ ಸೋಲಾರ್ ಅಳವಡಿಸುವಂತೆ ಗ್ರಾಮ ಮಟ್ಟದಲ್ಲಿ ಜನರಿಗೆ ಉತ್ತೇಜನ ನೀಡುವಂತೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

><><><><><><><><><><

ಬೆಂಗಳೂರು ನಗರದ ವಿಶ್ವೇಶ್ವರಯ್ಯ ಎಂಜಿನಿಯರಿಂಗ್ ವಿಶ್ವವಿದ್ಯಾಲಯ ಕಾಲೇಜು-ಯುವಿಇಸಿಯಲ್ಲಿ ಈ ವರ್ಷ ಪದವಿ ಮುಗಿಸಲಿರುವ ವಿದ್ಯಾರ್ಥಿಗಳ ಪೈಕಿ ಶೇಕಡ ೮೬.೧೪ ರಷ್ಟು ಮಂದಿ ಈಗಾಗಲೇ ಪ್ರತಿಷ್ಠಿತ ಕಂಪನಿಗಳಲ್ಲಿ ಉತ್ತಮ ಉದ್ಯೋಗಾವಕಾಶ ಗಿಟ್ಟಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಕಳೆದ ವರ್ಷ ಶೇಕಡ ೮೪ರಷ್ಟಿದ್ದ ವಿವಿಯ ಪ್ಲೇಸ್‌ಮೆಂಟ್ ದಾಖಲೆ ಈ ವರ್ಷ ಮತ್ತಷ್ಟು ಹೆಚ್ಚಾಗಿದೆ. ಯುವಿಸಿಇಗೆ ೨೦೨೧ರಲ್ಲಿ ಪ್ರವೇಶ ಪಡೆದಿದ್ದ ಸುಮಾರು ೯೦೦ ವಿದ್ಯಾರ್ಥಿಗಳು ಇನ್ನೇನು ಕೆಲ ತಿಂಗಳಲ್ಲಿ ೨೦೨೫ನೇ ಬ್ಯಾಚ್ ಪದವೀದರರಾಗಿ ಹೊರನಡೆಯಲಿದ್ದಾರೆ. ಈ ಪೈಕಿ ೭೭೬ ಮಂದಿ ಕ್ಯಾಂಪಸ್ ಸೆಲೆಕ್ಷನ್ ಮೂಲಕ ವಿವಿಧ ಕಂಪನಿಗಳಿಗೆ ನೇಮಕಗೊಂಡಿದ್ದಾರೆ. ವಿಶೇಷವೆಂದರೆ ಇವರೆಲ್ಲರೂ ಯುವಿಸಿಇ ವಿಶ್ವವಿದ್ಯಾಲಯದ ಮಾನ್ಯತೆ ಪಡೆಯದೆ ಕಾಲೇಜಾಗಿದ್ದಾಗ ದಾಖಲಾಗಿರುವ ಕೊನೆಯ ಬ್ಯಾಚ್ ವಿದ್ಯಾರ್ಥಿಗಳಾಗಿದ್ದಾರೆ.

><><><><><><><><><><

ಹಾವೇರಿ ಜಿಲ್ಲೆಯ ಇತಿಹಾಸದಲ್ಲಿಯೇ ಮೊದಲ ಮಹಿಳಾ ಪೊಲೀಸ್ ವರಿಷ್ಠಾಧಿಕಾರಿಯಾಗಿ ಯಶೋಧಾ ವಂಟಗೋಡಿ ಅಧಿಕಾರ ಸ್ವೀಕರಿಸಿದ್ದಾರೆ. ಇನ್ನೊಂದೆಡೆ ವಿಜಯನಗರ ಜಿಲ್ಲೆಯ ನೂತನ ಎಸ್‌ಪಿಯಾಗಿ ಜಾನ್ಹವಿ ಎಸ್. ಅಧಿಕಾರ ವಹಿಸಿಕೊಂಡರು. ಬಿ.ಎಲ್.ಹರಿಬಾಬು ಜಾನ್ಹವಿ ಎಸ್. ಅವರಿಗೆ ಅಧಿಕಾರ ಹಸ್ತಾಂತರಿಸಿದರು.

><><><><><><><><><><